ಓಎಸ್ ನಂ. 67/2021
ಪಿಡಬ್ಲ್ಯೂ : 01 **(ಚಂದ್ರಿಕಾ)**
**ದಿನಾಂಕ 24.06.2022 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರೆದ ಮುಖ್ಯವಿಚಾರಣೆ:- ವಾದಿ ಪರ ಶ್ರೀ ಎಂ.ಆರ್.ಪಿ ವಕೀಲರಿಂದ:-**

ಪ್ರತಿವಾದಿ ಬರೆದುಕೊಟ್ಟಿರುವ ದಿನಾಂಕ: 12.09.2018ರ ನೋಂದಣಿ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 1 ಎಂದು, ಸಾಕ್ಷಿಯು ಸದರಿ ಕ್ರಯದ ಕರಾರು ಪತ್ರದಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಕೊನೆಯ ಸಹಿಯನ್ನು ನಿ ಪಿ 1(ಎ) ಎಂದು, ಅದೇ ರೀತಿ ಪ್ರತಿವಾದಿಯ ಸಹಿಗಳನ್ನು ನೋಡಿ ಗುರುತಿಸಿದ್ದು ಪ್ರತಿವಾದಿಯ ಕೊನೆಯ ಸಹಿಯನ್ನು ನಿ ಪಿ 1(ಬಿ) ಎಂದು ಗುರುತಿಸಲಾಯಿತು. ನಿಪಿ 1 ಕ್ಕೆ ಸಾಕ್ಷಿದಾರರಾಗಿ ಜಮ್ಮನಹಳ್ಳಿ ಮುನಿಯಪ್ಪ ಎಂಬುವವರು ಸಹಿ ಮಾಡಿರುತ್ತಾರೆ.

ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಆರ್‌ಟಿಸಿ ಮತ್ತು ಮ್ಯುಟೇಶನ್ ರಿಜಿಸ್ಟರ್ ಎಕ್ಸ್‌ಟ್ರ್ಯಾಕ್ಟ್‌ನ್ನು ಯನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 2 ಮತ್ತು 3 ಎಂತಲೂ, ದಿನಾಂಕ: 07.10.2020 ರ ಕಛೇರಿ ನೋಟಿಸ್ಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 4 ಎಂತಲೂ, ಒಂದು ಅಂಚೆ ರಶೀತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 5 ಎಂತಲೂ, ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 6 ಎಂತಲೂ, ದಿನಾಂಕ: 27.08.2021ರ ಕಛೇರಿ ನೋಟಿಸ್ಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 7 ಎಂತಲೂ, ಇನ್ನೊಂದು ಅಂಚೆ ರಶೀತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 8 ಎಂತಲೂ, ಇನ್ನೊಂದು ಅಂಚೆ ಸ್ವೀಕೃತಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿ ಪಿ 9 ಎಂದು ಗುರುತಿಸಲಾಯಿತು.

ಆದುದರಿಂದ ನಾನು ಹೂಡಿರುವ ದಾವೆಯನ್ನು ಡಿಕ್ರಿ ಮಾಡಬೇಕೆಂದು ಘನ ನ್ಯಾಯಾಲಯದಲ್ಲಿ ಪ್ರಾರ್ಥಿಸಿಕೊಳ್ಳುತ್ತೇನೆ.

***ಪಾಟೀ ಸವಾಲುಃ ಪ್ರತಿವಾದಿಯ ಪರ ಶ್ರೀ ಎಸ್.ಎಂ.ಎ ವಕೀಲರಿಂದಃ-***

***ವಕೀಲರ ಕೋರಿಕೆಯ ಮೇರೆಗೆ ಕಾನೂನಾತ್ಮಕ ಅಂಶಗಳಿಗೆ ಸಂಬಂಧಪಟ್ಟಂತೆ ಪಿಡಬ್ಲ್ಯೂ 1 ರವರ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು.***

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೇ. ಸರಿ. ಇದೆ
ಸಹಿ/-
(ಈಶ್ವರ)
ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ ಮುಳಬಾಗಿಲು.